ಕರ್ನಾಟಕಸರ್ಕಾರ

(ಕಂದಾಯ ಇಲಾಖೆ)

ಉಪತಹಶೀಲ್ದಾರವರ ನ್ಯಾಯಾಲಯ ನಾಡಕಛೇರಿ ಹೊಸಹಳ್ಳಿ

ಸಂ/ಕಂ/ಹ.ಬ./ನಾಕಹೊ/47/2015-16. ದಿನಾಂಕ:25-07-2016.

| ವಾದಿಗಳು | ಪ್ರತಿವಾದಿಗಳು |
|---|---|
| ಸುಲೋಚನಮ್ಮ ಗಂಡ ಲೇಟ್ ಬಿ.ಕೊಟ್ರಣ್ಣ<br>ಆಲೂರು ಗ್ರಾಮ. ಕೂಡ್ಲಿಗಿ ತಾಲೂಕು. | ಕಂದಾಯ ಪರಿವೀಕ್ಷಕರು<br>ಹೊಸಹಳ್ಳಿ |
| ಕೂಡ್ಲಿಗಿ ತಾಲೂಕು ಕೆಂಚಮಲ್ಲನಹಳ್ಳಿ ಗ್ರಾಮದ ಸನಂ 305ಎಪೈಕಿ. 305ಬಿಪೈಕಿ. ವಿಸ್ತೀರ್ಣ 5-32. 2-01. ಎಕ್ರೆ ಜಮೀನುಗಳನ್ನು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡುವ ಬಗ್ಗೆ. | |

ಪ್ರಸ್ತಾವನೆ:

ಕೂಡ್ಲಿಗಿ ತಾಲೂಕು ಕೆಂಚಮಲ್ಲನಹಳ್ಳಿ ಗ್ರಾಮದ ಸನಂ 305ಎಪೈಕಿ. 305ಬಿಪೈಕಿ. ವಿಸ್ತೀರ್ಣ 5-32. 2-01. ಎಕ್ರೆ ಜಮೀನುಗಳನ್ನು ಸದರಿ ತಾಲೂಕು ಆಲೂರು ಗ್ರಾಮದ ಸುಲೋಚನಮ್ಮ ಗಂಡ ಲೇಟ್ ಬಿ.ಕೊಟ್ರಣ್ಣ ಇವರು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡಲು ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಈ ಬಗ್ಗೆ ಗ್ರಾಮಲೆಕ್ಕಿಗರು ಕೆಂಚಮಲ್ಲನಹಳ್ಳಿ ಇವರು ನಮೂನೆ-21 ನೋಟಿಸನ್ನು ದಿನಾಂಕ 13-02-2015. ರಂದು ಗ್ರಾಮದಲ್ಲಿ ಪ್ರಚೂರು ಪಡಿಸಿ ಹಾಗೂ ಸಂಬಂಧಪಟ್ಟವರಿಗೆ ಜಾರಿ ಮಾಡಲಾಗಿ ಪಟ್ಟದಾರರಾದ ಬಿ.ಕೊಟ್ರಣ್ಣ ತಂದೆ ಹಲಗಪ್ಪ ಇವರಿಗೆ ಇಬ್ಬರು ಹೆಂಡತಿಯರು ಇರುವುದೆಂದು ಕಂಡು ಬಂದ ಕಾರಣ ಈ ಪ್ರಕರಣದ ಎಂ.ಆರ್.ನಂಬರ್: 39/2014-15. ದಿನಾಂಕ 14-03-2015. ರಲ್ಲಿ ಗೈರು ಮಂಜೂರು ಮಾಡಿ ಮುಂದಿನ ಕ್ರಮಕ್ಕೆ ಈ ಕಾರ್ಯಾಲಯಕ್ಕೆ ಕಳುಹಿಸಿ ಕೊಟ್ಟಿರುತ್ತಾರೆ.

ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ವಿಚಾರಣೆ ಮಾಡುವ ದಿಸೆಯಲ್ಲಿ ಉಭಯ ಪಕ್ಷದವರಿಗೂ ನೋಟಿಸ್ಸು ನೀಡಿ ದಿನಾಂಕ 18-08-2015. ರಿಂದ 25-07-2016. ರ ವರೆಗೆ ವಿಚಾರಣೆ ಮಾಡಲಾಯಿತು.

ವಿಚಾರಣೆ ಸಮಯದಲ್ಲಿ ಅರ್ಜಿದಾರರು ಹಾಜರಾಗಿರುತ್ತಾರೆ. ಅರ್ಜಿದಾರು ಕೆಂಚಮಲ್ಲನಹಳ್ಳಿ ಗ್ರಾಮದ ಸನಂ 305ಎಪೈಕಿ. 305ಬಿಪೈಕಿ. ವಿಸ್ತೀರ್ಣ 5-32. 2-01. ಎಕ್ರೆ ಜಮೀನುಗಳು ನನ್ನ ಗಂಡನಾದ ಬಿ.ಕೊಟ್ರಣ್ಣ ತಂದೆ ಹಲಗಪ್ಪ ಇವರ ಹೆಸರಲ್ಲಿ ಲೆಕ್ಕ ದಾಖಲೆ ಪಟ್ಟಾ ಇರುತ್ತದೆ. ಇವರು ದಿನಾಂಕ 12-01-2014 ರಂದು ನಿಧನ ಹೊಂದಿರುತ್ತಾರೆ. ಕಾರಣ ಪೋತಿವಾರಸು ಹಕ್ಕಿನ ಪ್ರಕಾರ ನನ್ನ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಬೇಕೆಂದು ಕೋರಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದು ಕೊಂಡು ಸದರಿ ವಿವಾದಿತ ಜಮೀನುಗಳ ಕಂದಾಯ ಲೆಕ್ಕಗಳನ್ನು ಪರಿಶೀಲಿಸಿ ಅರ್ಜಿದಾರರ ಹೇಳಿಕೆಗಳನ್ನು ಕೇಳಿ ಸದರಿ ಜಮೀನುಗಳ ಬಗ್ಗೆ ಕಂದಾಯ ಪರಿವೀಕ್ಷಕರು ಮತ್ತು ಗ್ರಾಮಲೆಕ್ಕಗರು ಗ್ರಾಮದಲ್ಲಿ ಮರು ವಿಚಾರಣೆ ಮಾಡಲಾಗಿ ಸದರಿ ಪಟ್ಟದಾರರಿಗೆ ಒಬ್ಬರೇ ಪತ್ನಿಯರಿದ್ದು ಇನ್ನೊಬ್ಬ ಪತ್ನಿ ಇಲ್ಲವೆಂದು ಮಹಜರುಗಳೊಂದಿಗೆ ವರದಿ ಸಲ್ಲಿಸಿರುತ್ತಾರೆ. ಸದರಿಯವರ ವರದಿ ಆಧರಿಸಿ ಈ ಕೆಳಗಿನಂತೆ ಆದೇಶ ಮಾಡಲಾಗಿದೆ.

## -:ಆದೇಶ:-

ಮೇಲೆ ವಿವರಿಸಿದ ಸಂದರ್ಭ ವಾಸ್ತುವಾಂಶ ಮತ್ತು ಕಾರಣಗಳಿಂದ ಕೂಡ್ಲಿಗಿ ತಾಲೂಕು ಕೆಂಚಮಲ್ಲನಹಳ್ಳಿ ಗ್ರಾಮದ ಸನಂ 305ಎಪೈಕಿ. 305ಬಿಪೈಕಿ. ವಿಸ್ತೀರ್ಣ 5-32. 2-01. ಎಕ್ರೆ ಜಮೀನುಗಳನ್ನು ಪೋತಿವಾರಸು ಹಕ್ಕಿನ ಪ್ರಕಾರ ಅರ್ಜಿದಾರರಾದ ಸುಲೋಚನಮ್ಮ ಗಂಡ ಲೇಟ್ ಬಿ.ಕೊಟ್ರಣ್ಣ ಆಲೂರು ಗ್ರಾಮ ಇವರ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಲು ಆದೇಶಿಸಲಾಗಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ ಬೆರಳಚ್ಚು ಮಾಡಿಸಿ ತಪ್ಪುಗಳನ್ನು ತಿದ್ದಿ ದಿನಾಂಕ 25-07-2016 ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಲಾಗಿದೆ.

ಉಪತಹಶೀಲ್ದಾರರು
ನಾಡಕಛೇರಿ ಹೊಸಹಳ್ಳಿ

ಇದರ ಪ್ರತಿಯನ್ನು:

1) ಅರ್ಜಿದಾರರಾದ ಸುಲೋಚನಮ್ಮ ಗಂಡ ಲೇಟ್ ಬಿ.ಕೊಟ್ರಣ್ಣ ಆಲೂರು ಗ್ರಾಮ. ಕೂಡ್ಲಿಗಿ ತಾಲೂಕು ಇವರಿಗೆ ಕಳುಹಿಸಿ ಕೊಡಲಾಗಿದೆ.
2) ಕಂದಾಯ ಪರಿವೀಕ್ಷಕರು ಹೊಸಹಳ್ಳಿ ಇವರ ಮಾಹಿತಿಗಾಗಿ ಕಳುಹಿಸಿ ಕೊಡಲಾಗಿದೆ.
3) ಗಣಕೀಕರಣ ವಿಭಾಗ ತಾಲೂಕು ಕಛೇರಿ ಕೂಡ್ಲಿಗಿ ಇವರ ಮುಂದಿನ ಕ್ರಮಕ್ಕಾಗಿ ಕಳುಹಿಸಿ ಕೊಡಲಾಗಿದೆ.
4) ಅಪೀಲು ಅವಧಿ 60 ದಿವಸ ಇರುತ್ತದೆ.